**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಸಿ.ಸಿ.ನಂ. 649/2019</u>**

ದಿನಾಂಕಃ **10.09.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ಜಿ ತಮ್ಮಯ್ಯ | ಚಾಸಾ-6, ಪ್ರಾಸ.-6 |
| ತಂದೆಯ ಹೆಸರುಃ | ಗಂಗಪ್ಪ | |
| ವಯಸ್ಸು ಃ | 67 ವರ್ಷ | |
| ಉದ್ಯೋಗ ಃ | ವ್ಯವಸಾಯ | |
| ವಾಸ ಃ | ಬಳ್ಳಿಗನೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ಚಾಸಾ-2 ನನಗೆ ಗೊತ್ತು. ಆರೋಪಿತರು ನನಗೆ ಗೊತ್ತಿಲ್ಲ. ಸಾಕ್ಷಿ ನಿಪಿ-6 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2017-18 ನೇ ಸಾಲಿನಲ್ಲಿ ಚಾಸಾ-1 ರವರ ತೋಟದಲ್ಲಿ ಕೊಬ್ಬರಿ ಕಳ್ಳತನದ ವಿಚಾರವಾಗಿ ಹಾಕಿರುತ್ತೇನೆ. ನನ್ನ ಜೊತೆ ಚಾಸಾ-2, ಪೋಲಿಸರು ಇದ್ದರು ಬೇರೆ ಯಾರು ಇದ್ದರು ಎಂದು ನನಗೆ ನೆನಪಿಲ್ಲ. ಮಹಜರನ್ನು ಮಧ್ಯಾಹ್ನ ಮಾಡಿರುತ್ತಾರೆ ಸಮಯ ನನಗೆ ನೆನಪಿಲ್ಲ. ಸಾಕ್ಷಿಯು ನಿಪಿ-7 ರ ಛಾಯಾಚಿತ್ರದಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿರುವುದಿಲ್ಲ. ನಿಪಿ-7 ರ ಛಾಯಾಚಿತ್ರದಲ್ಲಿ ಇರುವ ವ್ಯಕ್ತಿಗಳ ಪರಿಚಯ ನನಗೆ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 04.12.2017 ರಂದು ಚಾಸಾ-1 ರವರ ತೋಟದಲ್ಲಿ ಕಳ್ಳತನವಾದ ವಿಚಾರವಾಗಿ ದಿಃ 15.12.2017 ರಂದು ಆರೋಪಿತರು ಕಳ್ಳತನ ಮಾಡಿದ ಜಾಗವನ್ನು ತೋರಿಸುವುದಾಗಿ ಹೇಳಿದ ಮೇರೆಗೆ ಸದರಿ ಪ್ರಕ್ರಿಯೆಗೆ ಮಹಜರ್ ಗೆ ಸಹಕರಿಸುವಂತೆ ನನಗೆ ಮತ್ತು ಚಾಸಾ-2 ರವರಿಗೆ ಕೋರಿಕೊಂಡಿದ್ದು, 3 ರಿಂದ 5 ನೇ ಆರೋಪಿತರು ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ 2.00 ರಿಂದ 2.30 ರವರೆಗೆ ನಿಪಿ-6 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-7 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ತಿಳಿದಿದ್ದರೂ ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ 2 ರಿಂದ 4 ನೇ ಆರೋಪಿತರನ್ನು ನಾನು ನೋಡಿರುವುದಿಲ್ಲ.

<u>ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ ಎಸ್ ಬಿ ವಕೀಲರಿಂದಃ</u>

ನಿಪಿ-6 ಕ್ಕೆ ಪೋಲಿಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.